6. ಆಯ್ಕೆ ವಿಧಾನ: –

6.1 ಕನ್ನಡ ಭಾಷಾ ಪರೀಕ್ಷೆ:- ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರ ಉಪನಿಯಮ (7) ರನ್ವಯ ಅರ್ಜಿ ಸಲ್ಲಿಸುವ ಎಲ್ಲಾ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯು ಕಡ್ಡಾಯವಾಗಿದ್ದು,ಸದರಿ ಪರೀಕ್ಷೆಯಲ್ಲಿ ಅರ್ಹತೆಯನ್ನು ಪಡೆಯದ ಹೊರತು, ಆಯ್ಕೆಗೆ ಅರ್ಹರಾಗುವುದಿಲ್ಲ. ಈ ಪರೀಕ್ಷೆಯು ಗರಿಷ್ಠ 150 ಅಂಕಗಳ ಒಂದು ಪ್ರಶ್ನೆಪತ್ರಿಕೆಯನ್ನು ಒಳಗೊಂಡಿರುತ್ತದೆ. ಅಭ್ಯರ್ಥಿಯು ಈ ಪತ್ರಿಕೆಯಲ್ಲಿ ಅರ್ಹತೆ ಹೊಂದಲು ಕನಿಷ್ಠ 50 ಅಂಕಗಳನ್ನು ಗಳಿಸಬೇಕು. ಈ ಪ್ರಶ್ನೆ ಪತ್ರಿಕೆಯನ್ನು SSLC ಹಂತದಲ್ಲಿನ ಪ್ರಥಮಭಾಷೆ ಕನ್ನಡವನ್ನು ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು.

6.2 ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹರಾದ ನಂತರ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಹಾಗೂ ತಿದ್ದುಪಡಿ ನಿಯಮ 2022 ರ ಉಪ ನಿಯಮ 5(ಡಿ)ರಂತೆ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡವಾರು ಪ್ರಮಾಣದ ಆಧಾರದ ಮೇಲೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು.

6.3 ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಅರ್ಹತೆ ಹೊಂದಲು ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆ ಹೊಂದುವುದು ಹಾಗೂ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿನ ಒಟ್ಟು ಅಂಕಗಳಲ್ಲಿ ಕನಿಷ್ಠ ಪಕ್ಷ ಶೇಕಡ 35 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ.

## ವಿಶೇಷ ಸೂಚನೆ:-

1. ವಿವಿಧ ಅಧಿಸೂಚನೆಗಳಲ್ಲಿ ಅಧಿಸೂಚಿಸಲಾದ ಏಕರೂಪ ಪಠ್ಯಕ್ರಮವನ್ನು ಹೊಂದಿರುವ ಗ್ರೂಪ್-ಸಿ ಹುದ್ದೆಗಳಿಗೆ ಒಂದೇ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುವುದು.
2. ಕನ್ನಡ ಭಾಷಾ ಪರೀಕ್ಷೆಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರಡಿ ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 29-11-2022ರಂದು ಹಾಗೂ ನಂತರ ನಡೆಸಲಾದ ಕನ್ನಡ ಭಾಷಾ ಪರೀಕ್ಷೆಗಳನ್ನು ಬರೆದು ಉತ್ತೀರ್ಣರಾಗಿದ್ದಲ್ಲಿ ಸದರಿ ಫಲಿತಾಂಶವನ್ನು ಈ ಅಧಿಸೂಚನೆಯ ಹುದ್ದೆಗಳ ಕನ್ನಡ ಭಾಷಾ ಪರೀಕ್ಷೆಗೆ ಪರಿಗಣಿಸಲಾಗುವುದು.

**6.4** ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:

**1.** ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಹಾಗೂ ತಿದ್ದುಪಡಿ ನಿಯಮ 2022ರ ಉಪನಿಯಮ 6(2)(ಎ) ರನ್ವಯ ಪದವಿ ವಿದ್ಯಾರ್ಹತೆ ಅಗತ್ಯವಿರುವ ಗ್ರೂಪ್ 'ಸಿ' ಹುದ್ದೆಗಳಿಗಾಗಿ ನಡೆಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಯು ಎರಡು ಪತ್ರಿಕೆಗಳನ್ನು ಒಳಗೊಂಡಿರುತ್ತದೆ. ಪ್ರತಿಯೊಂದು ಪತ್ರಿಕೆಯು ಗರಿಷ್ಠ 100 ಅಂಕಗಳೊಂದಿಗೆ ಲಿಖಿತ ಪ್ರಶ್ನೆಗಳನ್ನು ಒಳಗೊಂಡಿದ್ದು ವಸ್ತುನಿಷ್ಠ ಬಹುಆಯ್ಕೆ ಮಾದರಿಯಲ್ಲಿರುತ್ತವೆ. ಈ ಎರಡು ಪತ್ರಿಕೆಗಳಲ್ಲಿ ತಪ್ಪು ಉತ್ತರಗಳಿಗೆ ಋಣಾತ್ಮಕ (Negative) ಅಂಕಗಳನ್ನು ಪರಿಗಣಿಸಿ ಅಭ್ಯರ್ಥಿಯು ಗಳಿಸುವ ಒಟ್ಟು ಅಂಕಗಳನ್ನು ಪರಿಗಣಿಸಲಾಗುತ್ತದೆ. ಅಂದರೆ ಪ್ರತಿ ತಪ್ಪು ಉತ್ತರಕ್ಕೆ ಪ್ರಶ್ನೆಗೆ ನಿಗದಿಪಡಿಸಿದ ಅಂಕಗಳ ನಾಲ್ಕನೇ ಒಂದು ಭಾಗದಷ್ಟು (1/4) ಅಂಕಗಳನ್ನು ಕಡಿತಗೊಳಿಸಲಾಗುವುದು. ಅಭ್ಯರ್ಥಿಗಳು ಎರಡು ಪತ್ರಿಕೆಗಳ ಪರೀಕ್ಷೆಗಳಿಗೆ ಹಾಜರಾಗುವುದು ಕಡ್ಡಾಯವಾಗಿರುತ್ತದೆ. ಪತ್ರಿಕೆ 1 ರ ಪಠ್ಯಕ್ರಮವು ಈ ಕೆಳಗೆ ನಿರ್ದಿಷ್ಟಪಡಿಸಿದಂತೆ ಇರುತ್ತದೆ.

### ಪಠ್ಯಕ್ರಮ

**ಪತ್ರಿಕೆ - 1 ಸಾಮಾನ್ಯ ಜ್ಞಾನ** — **ಗರಿಷ್ಠ ಅಂಕಗಳು : 100**

**ಅವಧಿ : 1 ½ ಗಂಟೆಗಳು**

(ಎ) ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ವಿಷಯಗಳ ಸಾಮಾನ್ಯ ಜ್ಞಾನ.

(ಬಿ) ಸಾಮಾನ್ಯ ವಿಜ್ಞಾನ ವಿಷಯಗಳು.

(ಸಿ) ಭೂಗೋಳ ಶಾಸ್ತ್ರ ವಿಷಯಗಳು.

(ಡಿ) ಸಮಾಜ ವಿಜ್ಞಾನ ವಿಷಯಗಳು.

(ಇ) ಭಾರತೀಯ ಸಮಾಜ ಮತ್ತು ಅದರ ಬೆಳವಣಿಗೆಗಳ ಇತಿಹಾಸದ ವಿಷಯಗಳು.

(ಎಫ್) ಭಾರತದ ಮತ್ತು ಕರ್ನಾಟಕದ ಇತಿಹಾಸ.

(ಜಿ) ಭಾರತದ ಸಂವಿಧಾನದ ಮತ್ತು ಸಾರ್ವಜನಿಕ ಆಡಳಿತ.

(ಹೆಚ್) ಪ್ರಾಯೋಗಿಕ ಜ್ಞಾನ ಮತ್ತು ಬೌದ್ಧಿಕ ಸಾಮರ್ಥ್ಯದ ವಿಷಯಗಳು. (ಎಸ್ ಎಸ್ ಎಸ್ ಸಿ ಮಟ್ಟದ)

(ಐ) ಕರ್ನಾಟಕದ ಸಾಮಾಜಿಕ ಮತ್ತು ಸಾಂಸ್ಕೃತಿಕ ಇತಿಹಾಸದ ವಿಷಯಗಳು.

(ಜೆ) ಸ್ವಾತಂತ್ರ್ಯ ನಂತರದಲ್ಲಿ ಕರ್ನಾಟಕದ ಭೂ ಸುಧಾರಣೆಗಳು ಮತ್ತು ಸಾಮಾಜಿಕ ಬದಲಾವಣೆಗಳ ವಿಷಯಗಳು.

(ಕೆ) ಕರ್ನಾಟಕದ ಅರ್ಥ ವ್ಯವಸ್ಥೆ: ಅದರ ಸಾಮರ್ಥ್ಯ ಮತ್ತು ದೌರ್ಬಲ್ಯತೆ ಪ್ರಸ್ತುತ ಸ್ಥಿತಿಗತಿ ಕುರಿತ ವಿಷಯಗಳು.

(ಎಲ್) ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳ ವಿಷಯಗಳು.

(ಎಂ) ಕರ್ನಾಟಕ ಪರಿಣಾಮಕಾರಿ ಆಡಳಿತಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನದ ಪಾತ್ರ ಕುರಿತ ವಿಷಯಗಳು.

(ಎನ್) ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು.

(ಓ) ಭೌದ್ಧಿಕ ಸಾಮರ್ಥ್ಯದ ವಿಷಯಗಳು.

**ಪತ್ರಿಕೆ 2 ಅನ್ನು ಈ ಕೆಳಗೆ ನಿರ್ದಿಷ್ಟಪಡಿಸಲಾದಂತೆ ಮೂರು ಭಾಗಗಳಾಗಿ ವಿಭಾಗಿಸಲಾಗಿರುತ್ತದೆ.**

| | |
|---|---|
| **ಪತ್ರಿಕೆ - II** | **ಗರಿಷ್ಠ ಅಂಕಗಳು : 100** |
| | **ಅವಧಿ : 2 ಗಂಟೆಗಳು** |
| (ಎ) ಸಾಮಾನ್ಯ ಕನ್ನಡ | ಗರಿಷ್ಠ ಅಂಕಗಳು : 35 |
| (ಬಿ) ಸಾಮಾನ್ಯ ಇಂಗ್ಲೀಷ್ | ಗರಿಷ್ಠ ಅಂಕಗಳು : 35 |
| (ಸಿ) ಕಂಪ್ಯೂಟರ್ ಜ್ಞಾನ | ಗರಿಷ್ಠ ಅಂಕಗಳು : 30 |

**ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತವೆ.**

### 6.5 . ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರ:-

ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆಯೋಗವು ನಿಗದಿಪಡಿಸುವ ಯಾವುದೇ ಕೇಂದ್ರ ಸ್ಥಳದಲ್ಲಿ ನಡೆಸಲಾಗುವುದು ಹಾಗೂ ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತವೆ. ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡುವುದು ಹಾಗೂ ಇದೇ ಅಂತಿಮವಾಗಿರುತ್ತದೆ.

ಸದರಿ ಹುದ್ದೆಗಳಿಗೆ ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳ ವೇಳಾಪಟ್ಟಿಯನ್ನು ನಂತರದಲ್ಲಿ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

**ವಿಶೇಷ ಸೂಚನೆಗಳು:-**

ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ಅವರ ಪ್ರವೇಶ ಪತ್ರ ಹಾಗೂ ಅವರ ಭಾವಚಿತ್ರವಿರುವ ಮೂಲ ಗುರುತಿನ ಚೀಟಿ (ಚುನಾವಣಾ ಐಡಿ/ ಆಧಾರ್ ಕಾರ್ಡ್ / ಡ್ರೈವಿಂಗ್ ಲೈಸನ್ಸ್/ಪಾನ್ ಕಾರ್ಡ್/ಪಾಸ್ ಪೋರ್ಟ್ / ಸರ್ಕಾರಿ ನೌಕರರ ಐಡಿ) ಯನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಪರೀಕ್ಷಾ ಕೇಂದ್ರಕ್ಕೆ ಪ್ರವೇಶವನ್ನು ನೀಡಲಾಗುವುದಿಲ್ಲ ಹಾಗೂ ಡೌನ್‌ಲೋಡ್ ಮಾಡಿರುವ ಗುರುತಿನ ಚೀಟಿಗಳು / ಇತರೆ ಯಾವುದೇ ಗುರುತಿನ ಚೀಟಿಗಳು/ ಕಲರ್ ಜೆರಾಕ್ಸ್ ಪ್ರತಿಗಳನ್ನು ಪರಿಗಣಿಸಲಾಗುವುದಿಲ್ಲ.

ಸದರಿ ಹುದ್ದೆಗಳ ನೇಮಕಾತಿಗಳ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಫ್ ಲೈನ್ –ಓ.ಎಂ.ಆರ್ ಮಾದರಿ (Offline-OMR type) ಅಥವಾ ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ (Computer based recruitment test-CBRT) ಮುಖಾಂತರ ನಡೆಸಲಾಗುವುದು. ಈ ವಿಷಯದಲ್ಲಿ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ. ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ (Computer based recruitment test-CBRT) ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಿದಲ್ಲಿ

ಅಭ್ಯರ್ಥಿಗಳಿಗೆ ಈ ಸಂಬಂಧ ಸೂಚನೆಗಳನ್ನು ಹಾಗೂ ಅಣಕು ಪರೀಕ್ಷೆಯನ್ನು (Mock Test) ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

**ಸೂಚನೆ:- ಕನ್ನಡ ಭಾಷಾ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮ ವಿವರಗಳನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in/ Syllabus" ಲಿಂಕ್‌ನಲ್ಲಿ ಬಿತ್ತರಿಸಲಾಗಿದೆ.**

ಅಭ್ಯರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರಗಳನ್ನು ಆಯೋಗದ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಳ್ಳಲು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಆಯೋಗದ ವೆಬ್ ಸೈಟ್ ನಲ್ಲಿಯೂ ಬಿತ್ತರಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾಗತಕ್ಕದ್ದು.

**ಟಿಪ್ಪಣಿ:-** ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲೇ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಲಿಖಿತ ಮನವಿಯನ್ನು ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

7. **ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:-**

**7 (1) ಶೈಕ್ಷಣಿಕ ವಿದ್ಯಾರ್ಹತೆ:- ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ.**

**7 (2) ವಯೋಮಿತಿ:- ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ನಮೂದಿಸಿರುವ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.**

**ಅನುಸೂಚಿ**

| **ಗ್ರೂಪ್ 'ಸಿ' ಹುದ್ದೆಗಳು** | |
|---|---|
| ಹುದ್ದೆಗಳ ಅನು ಕ್ರಮಸಂಖ್ಯೆ | 231-245 |
| ಹುದ್ದೆಯ ಸಂಕೇತ/ POST CODE | 1 |
| ಇಲಾಖೆಯ ಹೆಸರು/ಹುದ್ದೆಯ ಪದನಾಮ / ಹುದ್ದೆಗಳ ಸಂಖ್ಯೆ | ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿನ ಕಲ್ಯಾಣ ಕರ್ನಾಟಕ ವೃಂದದ ವಾಣಿಜ್ಯ ತೆರಿಗೆ ಪರಿವೀಕ್ಷಕರು 15 ಹುದ್ದೆಗಳು |
| ವೇತನ ಶ್ರೇಣಿ | ರೂ.33,450 /- - 62,600/- |
| ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ | Should have obtained a degree of a University established by Law in India, with Economics or Mathematics as one of the subject, or in Commerce or should possess a qualification declared by the Government to be equivalent to such degree.<br>**ವಿಶೇಷ ಸೂಚನೆ:–** ಇಲಾಖೆಯ ಸ್ಪಷ್ಟೀಕರಣದಂತೆ Economics or Mathematics or Commerce ವಿಷಯಗಳಲ್ಲಿ ಯಾವುದಾದರು ಒಂದು ವಿಷಯವನ್ನು ಅಭ್ಯರ್ಥಿಗಳು ಅವರು ಹೊಂದಿರುವ ವಿದ್ಯಾರ್ಹತೆಯಲ್ಲಿ ಕನಿಷ್ಠ ಯಾವುದೇ ಒಂದು ಸೆಮಿಸ್ಟರ್ / ಒಂದು ವರ್ಷದಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಸದರಿ ಪದವಿಗಳನ್ನು ಸಹ ಪರಿಗಣಿಸಲಾಗುವುದು. |